ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು - 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2016-17 ದಿನಾಂಕ: 11-08-2016

## ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ / ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1. | "ಗ್ರಂಥಪಾಲಕರ ದಿನಾಚರಣೆ ಹಾಗೂ ಪ್ರಶಸ್ತಿ ಪ್ರದಾನ ಸಮಾರಂಭ"<br><br>ಉದ್ಘಾಟನೆ:<br><br>ಅನಂತಕುಮಾರ್,<br>ಕೇಂದ್ರ ರಾಸಾಯನಿಕ ಮತ್ತು ರಸಗೊಬ್ಬರ ಹಾಗು ಸಂಸದೀಯ ವ್ಯವಹಾರ ಖಾತೆ ಸಚಿವರು,<br><br>ಪುಸ್ತಕ ಪ್ರದರ್ಶನ ಉದ್ಘಾಟನೆ:<br><br>ಡಿ. ವಿ. ಸದಾನಂದಗೌಡ,<br>ಕೇಂದ್ರ ಸಾಂಖ್ಯಿಕ ಮತ್ತು ಕಾರ್ಯಕ್ರಮ ಅನುಷ್ಠಾನ ಖಾತೆ ಸಚಿವರು.<br><br>ಆರ್. ರೋಷನ್ ಬೇಗ್,<br>ನಗರಾಭಿವೃದ್ಧಿ ಹಾಗೂ ಹಜ್ ಖಾತೆ ಸಚಿವರು.<br><br>ಪ್ರಶಸ್ತಿ ಪ್ರದಾನ:<br><br>ತನ್ವೀರ್ ಸೇಠ್,<br>ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಖಾತೆ ಸಚಿವರು. | 12-08-2016<br>ಶುಕ್ರವಾರ<br>ಬೆಳಿಗ್ಗೆ<br>11-00 ಗಂಟೆಗೆ | ಗ್ರಂಥಾಂಗಣ,<br>ನಗರ ಕೇಂದ್ರ ಗ್ರಂಥಾಲಯ,<br>ಪಶ್ಚಿಮ ವಲಯ, ಹಂಪಿನಗರ,<br>ಬೆಂಗಳೂರು - 560 104 |
| 2. | ಕಿಯಾನಿಕ್ಸ್ ಸಂಸ್ಥೆ ವತಿಯಿಂದ ಇ-ತ್ಯಾಜ್ಯದ ವಿಲೇವಾರಿ ಕುರಿತಂತೆ ವಿಚಾರ ಸಂಕಿರಣ | 12-08-2016<br>ಶುಕ್ರವಾರ<br>ಸಂಜೆ | "LA Marvella" Hotel,<br>ನಂ 1, 14ನೇ ಅಡ್ಡ ರಸ್ತೆ,<br>ಸೌತ್ ಎಂಡ್ ವೃತ್ತ, ಜಯನಗರ, |

| | | | |
|---|---|---|---|
| | | 5–00 ಗಂಟೆಗೆ | ಬೆಂಗಳೂರು (ಸೌತ್ ಎಂಡ್ ವೃತ್ತದ ಪ್ರೆಟೋಲ್ ಬಂಕ್ ಹತ್ತಿರ. |

ನಿರ್ದೇಶಕರ ಪರವಾಗಿ

## ಪತ್ರಿಕಾ ಪ್ರಕಟಣೆ

# ಪ್ರವೇಶ ಪತ್ರ

**ಬೆಂಗಳೂರು, ಆಗಸ್ಟ್ 11 (ಕರ್ನಾಟಕ ವಾರ್ತೆ)**

ಕರ್ನಾಟಕ ಲೋಕಸೇವಾ ಆಯೋಗವು ಆಗಸ್ಟ್ 21 ರಂದು ನಡೆಸುವ ಕರ್ನಾಟಕ ರಾಜ್ಯ ಲೆಕ್ಕಪರಿಶೋಧನೆ ಮತ್ತು ಲೆಕ್ಕಪತ್ರ ಇಲಾಖೆಯ "ಸಹಾಯಕ ನಿಯಂತ್ರಕರು" ಸಮೂಹ 'ಎ' ವೃಂದದ 54 ಹುದ್ದೆಗಳು ಮತ್ತು "ಲೆಕ್ಕಪರಿಶೋಧನಾಧಿಕಾರಿ' ಸಮೂಹ 'ಬಿ' ವೃಂದದ ಒಟ್ಟು 162 ಹುದ್ದೆಗಳ ಪೂರ್ವಭಾವಿ ಪರೀಕ್ಷೆಯ ಪ್ರವೇಶ ಪತ್ರವನ್ನು ಅಭ್ಯರ್ಥಿಗಳು ತಮ್ಮ ರಿಜಿಸ್ಟರ್ಡ್ ಐ.ಡಿ. ಸಂಖ್ಯೆ ಮತ್ತು ಜನ್ಮ ದಿನಾಂಕವನ್ನು ನಮೂದಿಸಿ ಆಯೋಗದ ವೆಬ್‌ಸೈಟ್ http://kpsc.kar.nic.in ನಿಂದ ಡೌನ್‌ಲೋಡ್ ಮಾಡಿಕೊಳ್ಳಬಹುದಾಗಿದೆ.

ಪೂರ್ವಭಾವಿ ಪರೀಕ್ಷೆಯನ್ನು ಗಣಕ ಯಂತ್ರದ ಮೂಲಕ ನೇಮಕಾತಿ ಪರೀಕ್ಷೆ (Computer Based Recruitment Test – CBRT) ಮುಖಾಂತರ ನಡೆಸಲು ಆಯೋಗವು ತೀರ್ಮಾನಿಸಿರುತ್ತದೆ. ಅಭ್ಯರ್ಥಿಗಳಿಗೆ ಈ ಸಂಬಂಧ ಸೂಚನೆಗಳನ್ನು ಹಾಗೂ ಅಣಕು ಪರೀಕ್ಷೆಯನ್ನು (Mock Test) ತೆಗೆದುಕೊಳ್ಳುವ ಬಗ್ಗೆ ಮಾಹಿತಿಯನ್ನು ಆಯೋಗದ ಅಂತರ್ಜಾಲದಲ್ಲಿ ಪ್ರಕಟಿಸಲಾಗಿದೆ.

ಬಾಬು:ಜಿಪಿಆರ್.

# ಗ್ರಂಥಪಾಲಕರ ದಿನಾಚರಣೆ ಹಾಗೂ ಪ್ರಶಸ್ತಿ ಪ್ರದಾನ ಸಮಾರಂಭ

**ಬೆಂಗಳೂರು, ಆಗಸ್ಟ್ 11 (ಕರ್ನಾಟಕ ವಾರ್ತೆ)**

ಸಾರ್ವಜನಿಕ ಗ್ರಂಥಾಲಯ ಇಲಾಖೆ ವತಿಯಿಂದ ನಗರದ ಪಶ್ಚಿಮ ವಲಯದ ಹಂಪಿನಗರದ ನಗರ ಕೇಂದ್ರ ಗ್ರಂಥಾಲಯದ ಗ್ರಂಥಾಂಗಣದಲ್ಲಿ ಆಗಸ್ಟ್ 12 ರಂದು ಬೆಳಿಗ್ಗೆ

11–00 ಗಂಟೆಗೆ ಪದ್ಮಶ್ರೀ ಡಾ. ಎಸ್. ಆರ್. ರಂಗನಾಥನ್ ಅವರ ಜನ್ಮ ದಿನದ ಅಂಗವಾಗಿ "ಗ್ರಂಥಪಾಲಕರ ದಿನಾಚರಣೆ ಹಾಗೂ ಪ್ರಶಸ್ತಿ ಪ್ರದಾನ ಸಮಾರಂಭ" ವನ್ನು ಹಮ್ಮಿಕೊಂಡಿದೆ.

ಈ ಸಮಾರಂಭದ ಉದ್ಘಾಟನೆಯನ್ನು ಕೇಂದ್ರದ ರಾಸಾಯನಿಕ ಮತ್ತು ರಸಗೊಬ್ಬರ ಹಾಗೂ ಸಂಸದೀಯ ವ್ಯವಹಾರ ಸಚಿವ ಅನಂತಕುಮಾರ್ ಅವರು ನೆರವೇರಿಸುವರು. ಕೇಂದ್ರದ ಸಾಂಖ್ಯಿಕ ಮತ್ತು ಕಾರ್ಯಕ್ರಮ ಅನುಷ್ಠಾನ ಸಚಿವ ಡಿ.ವಿ. ಸದಾನಂದಗೌಡ, ಕರ್ನಾಟಕ ವಿಧಾನ ಪರಿಷತ್ತಿನ ಸಭಾಪತಿ ಡಿ.ಎಚ್. ಶಂಕರಮೂರ್ತಿ, ಕರ್ನಾಟಕ ವಿಧಾನಸಭೆಯ ವಿಧಾನ ಸಭಾಧ್ಯಕ್ಷ ಕೆ.ಬಿ. ಕೋಳಿವಾಡ್, ಹಾಗೂ ನಗರಾಭಿವೃದ್ಧಿ ಹಾಗೂ ಹಜ್ ಸಚಿವ ಆರ್. ರೋಷನ್ ಬೇಗ್ ಪುಸ್ತಕ ಪ್ರದರ್ಶನ ಉದ್ಘಾಟನೆಯನ್ನು ನೆರವೇರಿಸುವರು.

ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ, ಅಲ್ಪಸಂಖ್ಯಾತರ ಕಲ್ಯಾಣ, ವಕ್ಫ್ ಹಾಗೂ ಗ್ರಂಥಾಲಯ ಸಚಿವ ತನ್ವೀರ್ ಸೇಠ್ ಅವರು ಪುರಸ್ಕೃತರಿಗೆ ಪ್ರಶಸ್ತಿ ಪ್ರದಾನ ಮಾಡಲಿರುವ ಈ ಸಮಾರಂಭದಲ್ಲಿ ಲೋಕಸಭಾ ಸದಸ್ಯರು ಸಚಿವರು. ಶಾಸಕರು, ವಿರೋಧ ಪಕ್ಷದ ನಾಯಕರು ಮಹಾಪೌರರು, ಸೇರಿದಂತೆ ಅನೇಕ ಗಣ್ಯರು ಸಮಾರಂಭದಲ್ಲಿ ಪಾಲ್ಗೊಳ್ಳುವರು.

**ಬಾಬು:ಜಿಪಿಆರ್.**

# Film Festival

**Bangalore, August 10 (Karnataka Information)**

**Films Division is organizing three days Film Festival from 16th August, 2016 to 18th August, 2016 in coordination with Gandhi Bhavan at Bapu Hall, Gandhi Bhavan, Kumara Park West, Bangalore to commemorate the 70 years of Indian Independence during which the Films on National importance and Indian Independence Movement will be screened.**